**ಶ್ರೀ ಶಶೀಲ್ ಜಿ. ನಮೋಶಿ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು, ಮತ್ತು ಶ್ರೀ ರವಿಕುಮಾರ್ ಎನ್, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು, ಇವರುಗಳು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯ.**

**ಶ್ರೀ ಶಶೀಲ್ ಜಿ. ನಮೋಶಿ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಇವರು ಪ್ರಸ್ತಾಪಿಸಿರುವ ವಿಷಯ:**

"ಕರ್ನಾಟಕ ಲೋಕಸೇವಾ ಆಯೋಗ ವತಿಯಿಂದ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಆಯೋಗವು ಪರೀಕ್ಷೆ ನಡೆಸಿ ಆಯ್ಕೆ ಪಟ್ಟಿ ಪ್ರಕಟಿಸಲು ವರ್ಷಾನುಗಟ್ಟಲೆ ಸಮಯ ತೆಗೆದುಕೊಳ್ಳುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ.

ಈ ಬಗ್ಗೆ ಅಭ್ಯರ್ಥಿಗಳು ವರ್ಷಾನುಗಟ್ಟಲೆ ಕುಳಿತು ಪರೀಕ್ಷೆಗಳಿಗಾಗಿ ಓದಿಕೊಂಡು ತಯಾರಿ ಪರೀಕ್ಷೆ ಬರೆದು ನಂತರ ಆಯ್ಕೆ ಪಟ್ಟಿಗಾಗಿ ಮತ್ತೆ ವರ್ಷಾನುಗಟ್ಟಲೆ ಜಾತಕ ಪಕ್ಷಿಗಳಂತೆ ಕಾದು ಕುಳಿತುಕೊಳ್ಳುವ ಪರಿಸ್ಥಿತಿ ಎದುರಾಗಿದೆ. ಕೆಪಿಎಸ್ಸಿ ಆಯೋಗವು ಮಾಡುತ್ತಿರುವ ಈ ಕಾಲಹರಣ ವ್ಯವಸ್ಥೆಯಿಂದಾಗಿ ಲಕ್ಷಾಂತರ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆಯಬೇಕೆಂಬ ಆಸೆಯನ್ನೇ ಕಳೆದುಕೊಳ್ಳುತ್ತಿದ್ದಾರೆ. ದಿನಾಂಕ:4.12.2023ರಂದು ವಿವಿಧ ದಿನ ಪತ್ರಿಕೆಗಳಲ್ಲಿ ಪ್ರಕಟವಾಗಿರುವಂತೆ ಆಯೋಗವು ನಡೆಸಿರುವ ಗ್ರೂಪ್ ಎ ಬಿ ಸಿ ವೃಂದಗಳ ಪರೀಕ್ಷೆ ನಡೆದು ಸುಮಾರು ಎರಡು ವರ್ಷಗಳೇ ಕಳೆದರೂ ಕೂಡ ಇಲ್ಲಿಯವರೆಗೂ ಅಂತಿಮ ಪಟ್ಟಿಗಳನ್ನೇ ಬಿಡುಗಡೆ ಮಾಡಿಲ್ಲವೆಂದು ಮನನೊಂದು ಆಕ್ರೋಶಗೊಂಡ ಅಭ್ಯರ್ಥಿ ಒಬ್ಬರು ಕೆಪಿಎಸ್ಸಿ ಕಚೇರಿಯ ಮುಂದೆ ಪರೀಕ್ಷೆ ಬರೆದ ಕಾಗದ ಪತ್ರಗಳನ್ನು ಎಸೆದು ಪ್ರತಿಭಟನೆ ನಡೆಸಿರುವುದು ಬೆಳಕಿಗೆ ಬಂದಿದೆ. ಅಷ್ಟೇ ಅಲ್ಲದೆ ಪ್ರತಿಭಟಿಸಿದ ಅಭ್ಯರ್ಥಿಯನ್ನು ವಶಕ್ಕೆ ಪಡೆದ ಪೊಲೀಸರು ಆಯೋಗದ ಸೂಚನೆ ಮೇರೆಗೆ ಪ್ರಕರಣವನ್ನು ದಾಖಲಿಸಿರುವುದು ವಿಷಾದನೀಯ ಸಂಗತಿಯಾಗಿದೆ.

ಆದ್ದರಿಂದ ಇದೊಂದು ಲಕ್ಷಾಂತರ ಸ್ಪರ್ಧಾ ಆಕಾಂಕ್ಷಿಗಳ ಭವಿಷ್ಯದ ವಿಷಯವಾಗಿರುವುದರಿಂದ ಆಯೋಗದ ಪರೀಕ್ಷಾ ವ್ಯವಸ್ಥೆಯ ಬಗ್ಗೆ ಸರ್ಕಾರವು ಈ ಕೂಡಲೇ ಗಮನಹರಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿ ಆಗುತ್ತಿರುವ ಸಮಸ್ಯೆಗಳನ್ನು ಸರಿಪಡಿಸಿಕೊಳ್ಳುವಂತೆ ಕ್ರಮವಹಿಸಲು ಶೂನ್ಯ ವೇಳೆಯಲ್ಲಿ ಒತ್ತಾಯಿಸುತ್ತೇನೆ."

**ಶ್ರೀ ರವಿಕುಮಾರ್ ಎನ್, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು, ಇವರು ಪ್ರಸ್ತಾಪಿಸಿರುವ ವಿಷಯ:**

" ರಾಜ್ಯ ಸರ್ಕಾರಿ ಹುದ್ದೆಗಳಿಗೆ ನೇಮಕ ಮಾಡುವ ಕರ್ನಾಟಕ ಲೋಕಸೇವಾ ಆಯೋಗ (ಕೆ.ಪಿ.ಎಸ್.ಸಿ) ಕಳೆದ 2 ವರ್ಷದ ಹಿಂದೆ ರಾಜ್ಯದ ಎ. ಬಿ. ಸಿ ವೃಂದದ ಹುದ್ದೆಗಳ ನೇಮಕಕ್ಕೆ ಅರ್ಜಿ ಆಹ್ವಾನಿಸಲಾಗಿತ್ತು. ಆದರೆ ಪರೀಕ್ಷೆ ಬರೆದು 2 ವರ್ಷಗಳು ಕಳೆದರೂ ಇನ್ನು ಕರ್ನಾಟಕ ಲೋಕಸೇವಾ ಆಯೋಗ ಫಲಿತಾಂಶ ಮತ್ತು ಅಂತಿಮ ಪಟ್ಟಿ ಇನ್ನು ಪ್ರಕಟಿಸಿಲ್ಲ. ಈ ಬಗ್ಗೆ ಹಲವಾರು ಭಾರಿ ಅಭ್ಯರ್ಥಿಗಳು ಫಲಿತಾಂಶಕ್ಕೆ ಕೆ.ಪಿ.ಎಸ್.ಸಿ ಗೆ ಮನವಿ ಮಾಡಿದ್ದರೂ ಇಲ್ಲಿಯವರೆಗೂ ಯಾವುದೇ ಪ್ರಯೋಜನವಾಗಿಲ್ಲ. ಇದರಿಂ ದ ರಾಜ್ಯದ ಸಾವಿರಾರು ಬಡ-ಪ್ರತಿಭಾವಂತ ಅಭ್ಯರ್ಥಿಗಳು ಕಂಗಾಲಾಗಿ ಕಾಯುತ್ತಿದ್ದಾರೆ. ಒಂದೆಡೆ ಅಭ್ಯರ್ಥಿಗಳ ವಯೋಮತಿ ಮೀರುತ್ತಿದೆ. ಕೆಲಸ ಸಿಗದೇ, ಜೀವನ ನಿರ್ವಹಣೆಗೆ ಕಷ್ಟಪಡುತ್ತಿದ್ದಾರೆ. ಆದ್ದರಿಂದ ರಾಜ್ಯ ಸರ್ಕಾರ ಈ ಬಗ್ಗೆ ಕ್ರಮವಹಿಸಿ ಕೂಡಲೇ ಫಲಿತಾಂಶವನ್ನು ಪ್ರಕಟಿಸಿ ಪಟ್ಟಿ ಪ್ರಕಟಿಸಿ ಅಭ್ಯರ್ಥಿಗಳಿಗೆ ನ್ಯಾಯ ಒದಗಿಸಬೇಕೆಂದು ನಾನು ಸದನದ ಶೂನ್ಯವೇಳೆಯಲ್ಲಿ ಪ್ರಸ್ತಾಪಿಸುತ್ತಿದ್ದೇನೆ. "

**ಹೇಳಿಕೆ:**

ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡ ಕಾರಣಗಳಿಂದಾಗಿ ವಿಳಂಬವಾಗಿರುತ್ತದೆ.

1. ವಿವಿಧ ಹುದ್ದೆಗಳ ನೇಮಕಾತಿಗಳಿಗೆ ಸಂಬಂಧಿಸಿದಂತೆ ಹಲವಾರು ಹುದ್ದೆಗಳ ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸಿದ್ದು, ಅದರಲ್ಲಿ ಕೆಲವು ಅಭ್ಯರ್ಥಿಗಳು ಹಲವಾರು ಹುದ್ದೆಗಳಿಗೆ ಆಯ್ಕೆಯಾಗಿರುವುದರಿಂದ Common candidates ಗಳಿಂದ Willingness ಪಡೆಯಲು ಸೂಚನಾ ಪತ್ರ ಮತ್ತು ಇ-ಮೇಲ್ ಕಳುಹಿಸಲಾಗಿದ್ದು, ಅಭ್ಯರ್ಥಿಗಳಿಂದ ಸ್ವೀಕೃತವಾಗುವ ಮಾಹಿತಿಯನುಸಾರ ಮುಂದಿನ ಕ್ರಮ ಕೈಗೊಳ್ಳಬೇಕಾಗಿರುತ್ತದೆ.
2. ಪ್ರತಿ ನೇಮಕಾತಿ ಪ್ರಕ್ರಿಯೆಗಳಲ್ಲಿಯೂ ಅಭ್ಯರ್ಥಿಗಳು ಕಾನೂನು ಪ್ರಕರಣಗಳನ್ನು ದಾಖಲಿಸುತ್ತಿರುವುದರಿಂದ ಕೆಲವು ಸಂದರ್ಭಗಳಲ್ಲಿ ನೇಮಕಾತಿ ಪ್ರಕ್ರಿಯೆಗಳು ವಿಳಂಬವಾಗಲು ಕಾರಣವಾಗುತ್ತಿದೆ.
3. ಆಯೋಗವು ಅಧಿಸೂಚಿಸುವ ಕೆಲವು ಹುದ್ದೆಗಳ ನೇಮಕಾತಿ ಪ್ರಕ್ರಿಯೆಗಳಲ್ಲಿ ವಿಕಲಚೇತನ ಅಭ್ಯರ್ಥಿಗಳ ವೈದ್ಯಕೀಯ ತಪಾಸಣೆ ಕಾರ್ಯವನ್ನು ಮಾಡಿಸಬೇಕಾಗಿದ್ದರಿಂದ ವಿಳಂಬವಾಗಿರುತ್ತದೆ.
4. ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನಾ ಕಾರ್ಯಕ್ಕೆ ಹಾಜರಾಗುವ ಅಭ್ಯರ್ಥಿಗಳು ಕೆಲವು ಸಂದರ್ಭಗಳಲ್ಲಿ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಕಾಲಾವಕಾಶಗಳನ್ನು ತೆಗೆದುಕೊಳ್ಳುತ್ತಿದ್ದು, ನಿಗದಿತ ಸಮಯದಲ್ಲಿ ದಾಖಲೆಗಳನ್ನು ಸಲ್ಲಿಸದೇ ಇರುವುದರಿಂದಲೂ ವಿಳಂಬವಾಗುತ್ತಿದೆ.

-3-

ದಿನಾಂಕ:04-12-2023ರಂದು ಕರ್ನಾಟಕ ಲೋಕಸೇವಾ ಆಯೋಗದ ಕಛೇರಿಯ ಮುಂದೆ ನಡೆದ ಪ್ರತಿಭಟನೆಗೆ ಸಂಬಂಧಿಸಿದಂತೆ ಆಯೋಗದಿಂದ ದೂರು ದಾಖಲಾಗಿರುವುದಿಲ್ಲ. ಶಾಂತಕುಮಾರ್ ಎಂಬ ವ್ಯಕ್ತಿಯು ಏಕಾಏಕಿ ಕೆ.ಪಿ.ಎಸ್.ಸಿ. ಗೇಟ್ ಮುಂಭಾಗಕ್ಕೆ ಬಂದು ಎನ್‌ವಲಪ್ ಕವರ್‌ಗಳನ್ನು ಬಿಸಾಡಿ ದೊಂಬಿ ಎಬ್ಬಿಸಲು ಪ್ರಯತ್ನಿಸಿ ಸಾರ್ವಜನಿಕ ಶಾಂತತಾ ಭಂಗ ಉಂಟು ಮಾಡಿದ್ದರಿಂದ ಈತನ ವಿರುದ್ಧ ವಿಧಾನಸೌಧ ಪೊಲೀಸ್ ಠಾಣೆಯವರು ದಿನಾಂಕ: 04-12-2023ರಂದು ಸ್ವಯಂ ಪ್ರೇರಿತ ದೂರನ್ನು ದಾಖಲಿಸಿರುತ್ತಾರೆ.

ಕರ್ನಾಟಕ ಲೋಕಸೇವಾ ಆಯೋಗ ವತಿಯಿಂದ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಲು ಆಗುತ್ತಿರುವ ವಿಳಂಬವನ್ನು ತಡೆಗಟ್ಟುವ ನಿಟ್ಟಿನಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ತ್ವರಿತ ಗತಿಯಲ್ಲಿ ಪೂರ್ಣಗೊಳಿಸಲು ಆಯೋಗದ ಅಧಿಕಾರಿ /ನೌಕರರು ನಿಗದಿತ ಕಛೇರಿ ವೇಳೆಯ ಮುನ್ನ ಮತ್ತು ನಂತರ ಹಾಗೂ ಸಾರ್ವತ್ರಿಕ ರಜಾ ದಿನಗಳಲ್ಲಿ ನಿರಂತರವಾಗಿ ಕಾರ್ಯ ನಿರ್ವಹಿಸುತ್ತಿರುತ್ತಾರೆ. ಅಲ್ಲದೇ ನೇಮಕಾತಿ ಪ್ರಕ್ರಿಯೆಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಲು ತಾತ್ಕಾಲಿಕ ವೇಳಾ ಪಟ್ಟಿಯನ್ನು ಹಾಕಿಕೊಂಡು ಗುರಿಯನ್ನು ನಿಗದಿಪಡಿಸಿಕೊಂಡಿದ್ದು ಎಲ್ಲಾ ನೇಮಕಾತಿ ಪ್ರಕ್ರಿಯೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸಿಆಸುಇ 236 ಎಸ್ಎಲ್ಎ 2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ